## ಕುವೆಂಪು ಕನ್ನಡ ತಂತ್ರಾಂಶ – ಬೀಟಾ ಆವೃತ್ತಿ – ೧.೦

**ಕುವೆಂಪು ಕನ್ನಡ ತಂತ್ರಾಂಶವನ್ನು ಡೌನ್‌ಲೋಡ್ ಮಾಡಿಕೊಳ್ಳಲು**
http://www.kannadauniversity.org/kuvempusoftware/kuvempu.zip ಕ್ಲಿಕ್ಕಿಸಿ

**ಸೂಚನೆ :**

**ಡೌನ್‌ಲೋಡ್ ಮಾಡಿಕೊಂಡ** kuvempu.zip **ಫೈಲ್ ಜಿಪ್ ಫಾರ್ಮಾಟ್‌ನಲ್ಲಿರುತ್ತದೆ. ಈ ಫೈಲ್ ಅನ್ನು** Winzip [ **ಈ ತಂತ್ರಾಂಶವನ್ನು** http://www.winzip.com/downwz.htm **ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಿ**] **ತಂತ್ರಾಂಶವನ್ನು ಬಳಸಿಕೊಂಡು ಅನ್‌ಜಿಪ್** [ Right Click on kuvempu.zip File. Goto Winzip->Extract to here option] **ಮಾಡಿಕೊಳ್ಳಬೇಕು. ಅನ್‌ಜಿಪ್ ಆದ ನಂತರ** setup.exe **ಮೇಲೆ ಡಬಲ್‌ಕ್ಲಿಕ್ ಮಾಡಿ ನಂತರ ಮುಂದಿನ ಸೂಚನೆಯ ಅನುಸಾರ ತಂತ್ರಾಂಶವನ್ನು ನಿಮ್ಮ ಗಣಕದಲ್ಲಿ ಅನುಸ್ಥಾಪಿಸಿಕೊಳ್ಳಿ.**)
( File Format : Zip File Size : 11.4 MB Updated Date : 25.02.2007 )

ಇಪ್ಪತ್ತೊಂದನೆಯ ಶತಮಾನದ ಆರಂಭದಲ್ಲಿ ಜಾಗತೀಕರಣದ ಈ ಸಂಕ್ರಮಣದ ಸ್ಥಿತಿಯಲ್ಲಿ ಕನ್ನಡ ವಿಶ್ವವಿದ್ಯಾಲಯದ ರಚನೆ ಮತ್ತು ಕಾರ್ಯಗಳು ಸವಾಲಿನವು ಮತ್ತು ಜವಾಬ್ದಾರಿಯವೂ ಆಗಿವೆ. ಕನ್ನಡ ಎನ್ನುವ ಪರಿಕಲ್ಪನೆಯನ್ನು ಭಾಷೆ, ಸಾಹಿತ್ಯ, ಬದುಕು ಮತ್ತು ಅದರ ಆಧುನಿಕ ಸನ್ನಿವೇಶಗಳಲ್ಲಿ ಅರ್ಥೈಸುವ ಮತ್ತೆ ಕಟ್ಟುವ ಕೆಲಸವನ್ನು ಕನ್ನಡ ವಿಶ್ವವಿದ್ಯಾಲಯ ಒಂದು ಕಾಯಕದಂತೆ ಕೈಗೆತ್ತಿಕೊಂಡಿದೆ. ಕನ್ನಡ ಮತ್ತು ಅಭಿವೃದ್ಧಿ ಎನ್ನುವ ಎರಡು ಪರಿಕಲ್ಪನೆಗಳು ಎದುರುಬದುರಾಗುವ ಆತಂಕ ಒಂದು ಕಡೆಯಾದರೆ ಅವು ಒಂದನ್ನೊಂದು ಪ್ರಭಾವಿಸಿ ನೆರವಾಗುವ ಆವರಣ ವನ್ನು ನಿರ್ಮಾಣ ಮಾಡುವುದು ಇನ್ನೊಂದೆಡೆ ಇರುತ್ತದೆ. ಇಂತಹ ಸಂದರ್ಭ ದಲ್ಲಿ ಕನ್ನಡ ವಿಶ್ವವಿದ್ಯಾಲಯವು ಈ ಸಂಬಂಧಿಯಾದ ಹೊಸ ಆಲೋಚನೆಗಳ ಸಂವಾದ ಮತ್ತು ಅದರ ಅನ್ವಯಿಕ ಸಾಧ್ಯತೆಗಳಲ್ಲಿ ತನ್ನನ್ನುತೊಡಗಿಸಿಕೊಳ್ಳಲು ಬಯಸಿದೆ.

ಮಾಹಿತಿ ತಂತ್ರಜ್ಞಾನವು ಜಾಗತೀಕರಣದ ಪ್ರಮುಖ ಅಸ್ತ್ರವಾಗಿ ಪ್ರಯೋಗವಾಗುತ್ತಿರುವಾಗ ಈ ಅಸ್ತ್ರವನ್ನು ಕನ್ನಡದ ಅಭಿವೃದ್ಧಿಗಾಗಿ ಬಳಸುವಹೊಣೆಗಾರಿಕೆಯು ಕನ್ನಡ ವಿಶ್ವವಿದ್ಯಾಲಯದ ಮೇಲೆ ಇದೆ. ಕನ್ನಡ ತಂತ್ರಾಂಶಗಳ ಅಭಿವೃದ್ಧಿಯ ಎಲ್ಲಾ ತೊಡಕುಗಳನ್ನು ನಿವಾರಿಸಿಕೊಂಡು ಮುಂದೆ ಸಾಗಬೇಕೆನ್ನುವ ಉದ್ದೇಶದಿಂದ ಕನ್ನಡ ವಿಶ್ವವಿದ್ಯಾಲಯ ಈ ಸಂಬಂಧ ಸಾಹಿತಿಗಳ, ಭಾಷಾ ತಜ್ಞರ, ತಂತ್ರಜ್ಞರ ಸಮಾಲೋಚನೆಯನ್ನು ನಡೆಸಿ ಕನ್ನಡವು ಸರ್ವವ್ಯಾಪಿಯಾಗಿ ಬೆಳೆಯಲು ಶ್ರಮಿಸುತ್ತಿದೆ.

ಕನ್ನಡ ತಂತ್ರಾಂಶದ ಸಮಸ್ಯೆಯು ಬಹಳ ಸಂಕೀರ್ಣವೂ, ಜಟಿಲವೂ ಆಗಿರುವ ಸಂದರ್ಭದಲ್ಲಿ ಕನ್ನಡ ವಿಶ್ವವಿದ್ಯಾಲಯವು ಕುವೆಂಪು ಕನ್ನಡ ತಂತ್ರಾಂಶ ಎಂಬ ಕನ್ನಡ ತಂತ್ರಾಂಶವನ್ನು ಸಿದ್ಧಪಡಿಸುವ ಮೂಲಕ ಕನ್ನಡಿಗರ ಅಗತ್ಯ ಮತ್ತು ಅವಶ್ಯಕತೆಗಳನ್ನು ಪೂರೈಸುವ ಜವಾಬ್ದಾರಿಯನ್ನು ಹೊತ್ತಿದೆ. ಭಾಷೆ, ಸಾಹಿತ್ಯ, ಸಂಸ್ಕೃತಿ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ಕನ್ನಡವನ್ನು ಅಭಿವೃದ್ಧಿಗೊಳಿಸುವ ಮತ್ತು ಕನ್ನಡ ಭಾಷೆಯನ್ನು ಪ್ರಕಾಶನ, ಆಡಳಿತ, ಶಿಕ್ಷಣ, ಕಾನೂನು, ತಂತ್ರಜ್ಞಾನ, ವೈದ್ಯಕೀಯ, ವ್ಯವಹಾರ ಮುಂತಾದ ಕ್ಷೇತ್ರಗಳಲ್ಲಿ ಯಶಸ್ವಿಯಾಗಿ ಬಳಸುವ ಕೆಲಸವನ್ನು ನಿರ್ಮಿಸುವುದು ಕನ್ನಡ ವಿಶ್ವವಿದ್ಯಾಲಯದ ಕರ್ತವ್ಯವಾಗಿದೆ. ಕನ್ನಡ ತಂತ್ರಾಂಶ ಕ್ಷೇತ್ರದಲ್ಲಿ ಎದುರಿಸುತ್ತಿರುವ ಕೆಲವು ಸಮಸ್ಯೆಗಳನ್ನು ಮನಗೊಂಡು ಕನ್ನಡ ವಿಶ್ವವಿದ್ಯಾಲಯವು ನುರಿತ ತಂತ್ರಜ್ಞರ ಮಾರ್ಗದರ್ಶನದಲ್ಲಿ ಕುವೆಂಪು ಕನ್ನಡ ತಂತ್ರಾಂಶ ಎಂಬ ತಂತ್ರಾಂಶವನ್ನು ಸಿದ್ಧಪಡಿಸಿದೆ. ಈ ತಂತ್ರಾಂಶವು ಮುಖ್ಯವಾಗಿ (೧) ಕನ್ನಡ ಭಾಷೆಗೆ ಒಗ್ಗುವ ವಿವಿಧ ಇಪ್ಪತ್ತು ನಮೂನೆಯ ಕನ್ನಡ ಅಕ್ಷರಗಳು (ಟಿ.ಟಿ.ಎಫ್ ಫಾಂಟ್ಸ್) (೨) ವಿವಿಧ ಇಪ್ಪತ್ತು ನಮೂನೆಯ ಅಂಚಿನ ವಿನ್ಯಾಸಗಳ ಫಾಂಟ್ಸ್‌ಗಳು (ಬಾರ್ಡರ್ ಡಿಸೈನ್‌ಗಳು) (೩) ಹೇಮಾವತಿ,

PDF created with pdfFactory trial version www.pdffactory.com

ನೇತ್ರಾವತಿ, ಶರಾವತಿ, ಕಾವೇರಿ ಎಂಬ ನಾಲ್ಕು ಬಗೆಯ ಕೀಲಿಮಣೆ ವಿನ್ಯಾಸಗಳು(Keyboard Layout) (೪) ನಾಲ್ಕು ಪರಿವರ್ತಕಗಳು (Converter) ಈ ಸೌಲಭ್ಯಗಳನ್ನು ಹೊಂದಿದೆ. ಈ ತಂತ್ರಾಂಶವು ಕರ್ನಾಟಕ ಸರ್ಕಾರವು ನಿಗದಿಪಡಿಸಿದ ಗ್ಲಿಫ್ ಹಾಗೂ ಕೀಲಿಮಣೆಯ ಶಿಷ್ಟತೆ ಮತ್ತು ಏಕರೂಪತೆಗೆ ಅನುಗುಣವಾಗಿದೆ.

ಕನ್ನಡ ವಿಶ್ವವಿದ್ಯಾಲಯವು ಸಿದ್ಧಪಡಿಸಿರುವ ಮೇಲಿನ ನಾಲ್ಕು ಬಗೆಯ ಸೌಲಭ್ಯಗಳನ್ನು ಹೊಂದಿರುವ ಕುವೆಂಪು ಕನ್ನಡ ತಂತ್ರಾಂಶ ಎಂಬ ಹೆಸರಿನ ಈ ತಂತ್ರಾಂಶವನ್ನು (ಬೀಟಾ ಆವೃತ್ತಿ ೧.೦) ನಾಡಿಗೆ ಲೋಕಾರ್ಪಣೆ ಮಾಡಲು ಸಂತೋಷ ಪಡುತ್ತೇವೆ. ಕನ್ನಡದಲ್ಲಿ ಇಂತಹ ತಂತ್ರಾಂಶವೊಂದನ್ನು ಅಭಿವೃದ್ಧಿಪಡಿಸುವ ಅಗತ್ಯವನ್ನು ತಿಳಿಸಿದವರು ಮತ್ತು ಈ ಕುವೆಂಪು ಕನ್ನಡ ತಂತ್ರಾಂಶವನ್ನು ರೂಪಿಸಲು ಎಲ್ಲಾ ರೀತಿಯ ಮಾರ್ಗದರ್ಶನ, ಸಲಹೆ, ಸೂಚನೆ ಮತ್ತು ನೆರವನ್ನು ಇತ್ತವರು ಕನ್ನಡದ ಹಿರಿಯ ಸಾಹಿತಿ ಮತ್ತು ಚಿಂತಕರಾದ ಶ್ರೀ ಪೂರ್ಣಚಂದ್ರ ತೇಜಸ್ವಿಯವರು. ಶ್ರೀ ತೇಜಸ್ವಿಯವರ ವಿಶೇಷವಾದ ಅನುಭವ ಮತ್ತು ಸೃಜನಶೀಲ ತಾಂತ್ರಿಕ ಪರಿಣತಿ ಮತ್ತು ನಿರಂತರ ಸಂಯೋಜನೆಯ, ಪ್ರೀತಿಯ ಕಾಯಕದ ಫಲವಾಗಿ ಕನ್ನಡ ವಿಶ್ವವಿದ್ಯಾಲಯವು ಈ ಕುವೆಂಪು ಕನ್ನಡ ತಂತ್ರಾಂಶವನ್ನು ರೂಪಿಸಲು ಮತ್ತು ಅದರ ಬೀಟಾ ೧.೦ ಆವೃತ್ತಿಯನ್ನು ಕನ್ನಡನಾಡಿಗೆ ಲೋಕಾರ್ಪಣೆ ಮಾಡಲು ಸಾಧ್ಯವಾಗಿದೆ ಎಂದು ತಿಳಿಸಲು ಅಭಿಮಾನ ಪಡುತ್ತೇನೆ. ಮಾರುತಿ ತಂತ್ರಾಂಶ ಅಭಿವೃದ್ಧಿಗಾರರು, ಹಾಸನದ ಶ್ರೀ ಆನಂದ ಮತ್ತು ಶ್ರೀ ಮಂಜಾಚಾರಿ ಅವರು ತಮ್ಮ ಯುವ ತಂಡದ ನೆರವಿನಿಂದ ಕನ್ನಡದ ಈ ಕನಸನ್ನು ನನಸನ್ನಾಗಿಸಿದ್ದಾರೆ. ಪರಿಶ್ರಮ ಮತ್ತು ಪ್ರೀತಿ, ಅನ್ವೇಷಕ ಪ್ರವೃತ್ತಿ ಮತ್ತು ಅನ್ವಯಿಕ ದೃಷ್ಟಿಯುಳ್ಳ ಈ ಇಬ್ಬರು ತರುಣ ತಂತ್ರಜ್ಞರ ಸಾಧನೆ ಅಪೂರ್ವವಾದುದು. ಕನ್ನಡ ವಿಶ್ವವಿದ್ಯಾಲಯದ ಈ ನೂತನ ಪ್ರಯತ್ನಕ್ಕೆ ಕುವೆಂಪು ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳೂ ಹಿರಿಯ ಗಣಕ ತಜ್ಞರೂ ಆಗಿರುವ ಡಾ. ಕೆ ಚಿದಾನಂದ ಗೌಡರು ಮತ್ತು ಮೈಸೂರಿನ ಜಯಚಾಮರಾಜೇಂದ್ರ ಇಂಜಿನಿಯರಿಂಗ್ ಕಾಲೇಜಿನ ಕಂಪ್ಯೂಟರ್ ವಿಭಾಗದ ಪ್ರಾಧ್ಯಾಪಕರಾಗಿರುವ ಡಾ. ಟಿ.ಎನ್. ನಾಗಭೂಷಣ್ ಅವರು ಸಮಾಲೋಚಕ ತಜ್ಞರಾಗಿ ನಿರಂತರ ತಮ್ಮ ಮಾರ್ಗದರ್ಶನ ಮತ್ತು ಅನುಭವದ ಸಲಹೆಗಳ ಮೂಲಕ ಸಮರ್ಪಕ ನಿರ್ವಹಣೆಗೆ ಸಹಕರಿಸಿದ್ದಾರೆ. ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳೂ ಕನ್ನಡದ ಹಿರಿಯ ಸಾಹಿತಿಗಳೂ ಆದ ಡಾ. ಚಂದ್ರಶೇಖರ ಕಂಬಾರರು ತಮ್ಮ ಶಾಸಕರ ನಿಧಿಯಿಂದ ಈ ಪ್ರಯತ್ನಕ್ಕೆ ಪ್ರಾರಂಭಿಕ ಆರ್ಥಿಕ ನೆರವನ್ನು ಕೊಟ್ಟಿದ್ದಾರೆ.

ಕುವೆಂಪು ಕನ್ನಡ ತಂತ್ರಾಂಶವು ಉಚಿತವಾಗಿ ಲಭ್ಯವಿದ್ದು, ಕನ್ನಡ ವಿಶ್ವ ವಿದ್ಯಾಲಯ, ಹಂಪಿ ಅಂತರ್ಜಾಲ ತಾಣ www.kannadauniversity.orgನಲ್ಲಿ ಈ ತಂತ್ರಾಂಶದ ಬೀಟಾ ಆವೃತ್ತಿಯನ್ನು ಡೌನ್‌ಲೋಡ್ ಮಾಡಿಕೊಂಡು ಬಳಸಬಹುದು. ಈ ತಂತ್ರಾಂಶದ ಮುಂದಿನ ಅಭಿವೃದ್ಧಿಗೆ ನಿಮ್ಮ ಸಲಹೆ, ಸೂಚನೆ, ಮಾರ್ಗದರ್ಶನಗಳನ್ನು ಇ-ಮೇಲ್ ಮೂಲಕ ಈ ವಿಳಾಸಕ್ಕೆ ಕಳುಹಿಸ ಬಹುದು. ಇ-ಮೇಲ್ ವಿಳಾಸ: kuvempusoftware@gmail.com

ಆಧುನಿಕ ಸನ್ನಿವೇಶದಲ್ಲಿ ವಿದ್ಯುನ್ಮಾನ ಮಾಧ್ಯಮದಲ್ಲಿ ಕನ್ನಡವನ್ನು ಪರಿಣಾಮಕಾರಿಯಾಗಿ ಬಳಸುವ ದೃಷ್ಟಿಯಿಂದ ಕನ್ನಡ ವಿಶ್ವವಿದ್ಯಾಲಯ, ಹಂಪಿಯು ರೂಪಿಸಿದ ಕುವೆಂಪು ಕನ್ನಡ ತಂತ್ರಾಂಶ ಬೀಟಾ ಆವೃತ್ತಿ ೧.೦ನ್ನು ಕನ್ನಡಿಗರು ಆದರದಿಂದ ಬರಮಾಡಿಕೊಂಡು ದೈನಂದಿನ ಬಳಕೆಯಲ್ಲಿ ಉಪಯೋಗಿಸಬೇಕೆಂದು ಸಮಸ್ತ ಕನ್ನಡಿಗರಲ್ಲಿ ವಿನಂತಿಸಿಕೊಳ್ಳುತ್ತೇನೆ.

ಡಾ. ಬಿ.ಎ. ವಿವೇಕ ರೈ
ಕುಲಪತಿಗಳು

**ಕುವೆಂಪು ಕನ್ನಡ ತಂತ್ರಾಂಶವನ್ನು ಡೌನ್‌ಲೋಡ್ ಮಾಡಿಕೊಳ್ಳಲು**

http://www.kannadauniversity.org/kuvempusoftware/kuvempu.zip ಕ್ಲಿಕ್ಕಿಸಿ

PDF created with pdfFactory trial version www.pdffactory.com

( File Format : Zip File Size : 11.4 MB Updated Date : 25.02.2007 )

**ನಿಮ್ಮ ಸಲಹೆ, ಸೂಚನೆ, ಮಾರ್ಗದರ್ಶನಗಳನ್ನು ಕೆಳಗಿನ ಇ-ಮೇಲ್ ವಿಳಾಸಕ್ಕೆ ಕಳುಹಿಸಿ. ಇ-ಮೇಲ್ ವಿಳಾಸ :**
kuvempusoftware@gmail.com

PDF created with pdfFactory trial version www.pdffactory.com